# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಡಿ.ಹೇಮಂತ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನೆಲಮಂಗಲ ಇವರ ವಿರುದ್ಧ ಇಲಾಖಾ ವಿಚಾರಣೆ – ಆರೋಪಗಳಿಂದ ದೋಷಮುಕ್ತಗೊಳಿಸುವ ಬಗ್ಗೆ.

**ಓದಲಾಗಿದೆ.**

1. ಸರ್ಕಾರದ ಆದೇಶ ಸಂಖ್ಯೆ. ಗ್ರಾಅಪ 15 ಇಎನ್‌ಕ್ಯೂ 2010, ದಿನಾಂಕ. 28-01-2011
2. ವಿಚಾರಣಾಧಿಕಾರಿಗಳ ವಿಚಾರಣಾ ವರದಿ ದಿನಾಂಕ. 09-06-2011
3. ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ದಿನಾಂಕ. 22-08-2011
4. ಶ್ರೀ ಡಿ. ಹೇಮಂತ್, ಸಕಾಇಂ ಇವರ ಲಿಖಿತ ಹೇಳಿಕೆ ದಿ.29-02-2011

**ಪ್ರಸ್ತಾವನೆ:**

ಶ್ರೀ ಡಿ. ಹೇಮಂತ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನೆಲಮಂಗಲ ಇವರು ಬಿಜೆಪಿ ಪಕ್ಷದ ಅಧ್ಯಕ್ಷರ ಆಯ್ಕೆಯ ರಾಜಕೀಯ ಪಕ್ಷದ ಸಭೆಯಲ್ಲಿ ಭಾಗವಹಿಸಿ ನಿಯಮಗಳನ್ನು ಉಲ್ಲಂಘಿಸಿದ ಆರೋಪದ ಮೇಲೆ ಇಲಾಖಾ ವಿಚಾರಣೆಯನ್ನು ನಡೆಸಲು ಮೇಲೆ ಕ್ರಮ ಸಂಖ್ಯೆ (1)ರ ಆದೇಶದಲ್ಲಿ ಓದಲಾದ ದಿನಾಂಕ. 28-01-2011ರಲ್ಲಿ ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ನಡೆಸಿ ಮೇಲೆ ಕ್ರಮ ಸಂಖ್ಯೆ. (2)ರಲ್ಲಿ ಓದಲಾದ ದಿನಾಂಕ. 09-06-2011ರಂದು ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಶ್ರೀ ಡಿ.ಹೇಮಂತ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಮಾಡಲಾದ ಆರೋಪ ಸಾಬೀತಾಗಿರುವುದಿಲ್ಲವೆಂದು ವರದಿ ಸಲ್ಲಿಸಿದ್ದರು.

ಸರ್ಕಾರವು ವಿಚಾರಣಾ ವರದಿಯನ್ನು ಪರಿಶೀಲಿಸಿ, ಈ ಅಧಿಕಾರಿಯು ರಾಜಕೀಯ ಪಕ್ಷದ ಸಭೆಯಲ್ಲಿ ಭಾಗವಹಿಸಿರುವುದು ಕಂಡು ಬಂದ ಕರಣ ವಿಚಾರಣಾ ವರದಿಯನ್ನು ಒಪ್ಪದೆ, ಆರೋಪಗಳು ಸಾಬೀತಾಗಿವೆಯೆಂದು ನಿರ್ಣಯಿಸಬಾರದು ಎಂಬ ಬಗ್ಗೆ ಶ್ರೀ ಡಿ.ಹೇಮಂತ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ಮೇಲೆ ಕ್ರಮ ಸಂಖ್ಯೆ. (3)ರಲ್ಲಿ ಓದಲಾದ ದಿನಾಂಕ. 22-08-2011ರಂದು 2ನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿತ್ತು.

ಶ್ರೀ ಡಿ.ಹೇಮಂತ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ. 29-02-2011ರಂದು ಸಲ್ಲಿಸಿರುವ ಲಿಖಿತ ಸಮಜಾಯಿಷಿಯಲ್ಲಿ ಸದರಿಯವರು ಯಾವುದೇ ರಾಜಕೀಯ ಸಮಾರಂಭದಲ್ಲಿ ಭಾಗವಹಿಸಿರುವುದಿಲ್ಲವೆಂದು ತಿಳಿಸುತ್ತಾ, ಅವರ ವಿರುದ್ಧ ಮಾಡಿರುವ ಆರೋಪಗಳನ್ನು ಕೈಬಿಟ್ಟು ದೋಷಮುಕ್ತಗೊಳಿಸಬೇಕೆಂದು ಕೋರಿರುತ್ತಾರೆ.

-----2

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಪ್ರಕರಣದಲ್ಲಿ ಶ್ರೀ ಡಿ.ಹೇಮಂತ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನೆಲಮಂಗಲ ಇವರ ಮೇಲೆ ಮಾಡಿರುವ ಆರೋಪಗಳನ್ನು ಸಾಬೀತುಪಡಿಸಲು ಬಲವಾದ ಸಾಕ್ಷಿಗಳು ಇಲ್ಲದ ಕಾರಣ ವಿಚಾರಣಾಧಿಕಾರಿಗಳು ಆರೋಪಗಳು ಸಾಬೀತಾಗಿರುವುದಿಲ್ಲವೆಂದು ನೀಡಿರುವ ವಿಚಾರಣಾ ವರದಿಯನ್ನು ಒಪ್ಪಿ, ಸದರಿಯವರ ವಿರುದ್ಧ ಮಾಡಿರುವ ಆರೋಪಗಳಿಂದ ಮುಕ್ತಗೊಳಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 15 ಇಎನ್‌ಕ್ಯೂ 2010, ಬೆಂಗಳೂರು,**
**ದಿನಾಂಕ. 10-05-2012**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಡಿ.ಹೇಮಂತ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನೆಲಮಂಗಲ ಪ್ರಸ್ತುತ ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಕಾಟನ್‌ಪೇಟೆ ಉಪ ವಿಭಾಗ, ಬೆಂಗಳೂರು ಇವರ ವಿರುದ್ಧ ಮಾಡಲಾದ ಮೇಲ್ಕಂಡ ಆರೋಪಗಳಿಂದ ಕೈಬಿಟ್ಟು ದೋಷಮುಕ್ತಗೊಳಿಸಿದೆ.

ಸದರಿ ಅಧಿಕಾರಿಯು ಇನ್ನು ಮುಂದೆ ಯಾವುದೇ ರಾಜಕೀಯ ಸಭೆ ಸಮಾರಂಭಗಳಲ್ಲಿ ಭಾಗವಹಿಸಿದಲ್ಲಿ ಅದನ್ನು ಗಂಭೀರವಾಗಿ ಪರಿಗಣಿಸಲಾಗುವುದೆಂದು " **ಎಚ್ಚರಿಕೆ** " ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
10/5/2012
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು
6. ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು
7. ಶ್ರೀ ಡಿ.ಹೇಮಂತ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಕಾಟನ್‌ಪೇಟೆ ಉಪ ವಿಭಾಗ, ಬೆಂಗಳೂರು
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
9. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರದಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
11. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.